ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/47/ಸುತ್ತೋಲೆ/2016-17

ದಿನಾಂಕ:19.05.2017.

## ಸುತ್ತೋಲೆ

ವಿಷಯ: ರಾಜ್ಯದ ಎಲ್ಲಾ ಕಾಲೇಜುಗಳಲ್ಲಿ "ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ" ಆಚರಿಸುವ ಬಗ್ಗೆ.

ಉಲ್ಲೇಖ: ಆಯುಕ್ತರು, ಕಾರ್ಮಿಕ ಕಛೇರಿ,ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಕೆಸಿಪಿ/ಸಿಎಎಲ್/ಸಿಆರ್-1/2017-18 ದಿನಾಂಕ: 09.05.2017.

* * * * * *

ಪ್ರತಿ ವರ್ಷ ಜೂನ್ 12 ರಂದು ವಿಶ್ವದಾದ್ಯಂತ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯನ್ನು ಆಚರಿಸಲಾಗುತ್ತಿದ್ದು, ಸಾಮಾಜಿಕ-ಆರ್ಥಿಕ ಹಂದರದಲ್ಲಿ ಗಾಢವಾಗಿ ಹಾಸುಹೊಕ್ಕಾಗಿರುವ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕ ಪದ್ಧತಿಯನ್ನು ನಿರ್ಮೂಲನೆಗೊಳಿಸುವ ನಿಟ್ಟಿನಲ್ಲಿ ವಿದ್ಯಾರ್ಥಿಗಳು, ಪೋಷಕರು, ಸಮುದಾಯ ಹಾಗೂ ಶಾಲೆಯಿಂದ ಹೊರಗುಳಿದ ಮಕ್ಕಳಲ್ಲಿ ಅರಿವು ಮೂಡಿಸುವುದರ ಮೂಲಕ ಸಂಘಟಿತ ಪ್ರಯತ್ನ ನಡೆಸುವುದು ಅತ್ಯಗತ್ಯವಾಗಿರುತ್ತದೆ. ಈ ಸಂಬಂಧ ದಿನಾಂಕ:12.06.2017ರಂದು ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನ ರಹಿತ ಕಾಲೇಜುಗಳಲ್ಲಿ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯನ್ನು ಆಚರಿಸುವಂತೆ ಹಾಗೂ ಇದರ ಅಂಗವಾಗಿ ಪ್ರಬಂಧ ರಚನಾ ಸ್ಪರ್ಧೆ, ಚರ್ಚಾಸ್ಪರ್ಧೆ, ಭಾಷಣ, ಕಿರುನಾಟಕಗಳು, ಗೀತರಚನಾ ಸ್ಪರ್ಧೆ ಮುಂತಾದ ಕಾರ್ಯಕ್ರಮಗಳನ್ನು ಏರ್ಪಡಿಸುವುದರ ಮೂಲಕ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು(ಪ್ರ)

ಇವರಿಗೆ:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಗುಲಬರ್ಗಾ.
2. ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.

ಪ್ರತಿಯನ್ನು:-

1. ಆಯುಕ್ತರು, ಕಾರ್ಮಿಕ ಭವನ, ಡೈರಿ ಸರ್ಕಲ್, ಬನ್ನೇರುಘಟ್ಟ ರಸ್ತೆ, ಬೆಂಗಳೂರು-560029-ಮಾಹಿತಿಗಾಗಿ.
2. ಕಛೇರಿ ಪ್ರತಿ.